# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 987 |
| 2 | ಸದಸ್ಯರ ಹೆಸರು | ಶ್ರೀಮತಿ ಬಲ್ಕೀಸ್ ಬಾನು<br>(ವಿಧಾನಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸಬೇಕಾದ ದಿನಾಂಕ | 11-03-2026 |
| 4 | ಉತ್ತರಿಸುವವರು | ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು |
| | **ಪ್ರಶ್ನೆಗಳು** | **ಉತ್ತರ** |
| ಅ) | ರಾಜ್ಯದಲ್ಲಿ ರೇಷ್ಮೆ ಇಲಾಖೆಯಲ್ಲಿ ಸಿಬ್ಬಂದಿ ಕೊರತೆಯಿಂದಾಗಿ ರೇಷ್ಮೆ ಬೆಳೆಗಾರರಿಗೆ ಇಲಾಖೆಯಿಂದ ಸಿಗಬೇಕಾದ ಸೌಲಭ್ಯ ಹಾಗೂ ನೆರವುಗಳು ಸಕಾಲದಲ್ಲಿ ದೊರೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರೇಷ್ಮೆ ಇಲಾಖೆಯಲ್ಲಿ ಮಂಜೂರಾದ 4299 ಹುದ್ದೆಗಳ ಪೈಕಿ ಪ್ರಸ್ತುತ 1142 ಹುದ್ದೆಗಳು ಭರ್ತಿಯಾಗಿದ್ದು, 3157 ಹುದ್ದೆಗಳು ಖಾಲಿ ಇರುತ್ತವೆ. ಇಲಾಖೆಯಲ್ಲಿ ಹುದ್ದೆಗಳು ಖಾಲಿ ಇದ್ದರೂ ಸಹ ಹಾಲಿ ಲಭ್ಯವಿರುವ ಅಧಿಕಾರಿ / ಸಿಬ್ಬಂದಿಗಳ ಸೇವೆಯನ್ನು ಪರಿಣಾಮ-ಕಾರಿಯಾಗಿ ಬಳಸಿಕೊಂಡು (ಅಧಿಕಾರಿ / ಸಿಬ್ಬಂದಿಗಳನ್ನು ಹೆಚ್ಚುವರಿ ಪ್ರಭಾರದಲ್ಲಿರಿಸುವ ಮೂಲಕ) ಹಾಗೂ ರೇಷ್ಮೆ ವಿಸ್ತರಣಾ ಚಟುವಟಿಕೆ ಕೈಗೊಳ್ಳಲು ಇಲಾಖೆಯಲ್ಲಿ ಲಭ್ಯವಿರುವ ಅನುದಾನಕ್ಕೆ ಒಳಪಟ್ಟು 88 ಪ್ರಗತಿಪರ ರೇಷ್ಮೆ ಕೃಷಿಕರಿಗೆ ಹೆಚ್ಚಿನ ತರಬೇತಿ ಹಾಗೂ ಗೌರವ ಧನ ನೀಡಿ ರೇಷ್ಮೆ ವಿಸ್ತರಣಾ ಕಾರ್ಯಕರ್ತನ್ನಾಗಿ ಬಳಸಿಕೊಂಡು ಸರ್ಕಾರದ ವಿವಿಧ ಯೋಜನೆಯನ್ನು ಅನುಷ್ಠಾನಗೊಳಿಸಲು ಹಾಗೂ ಸರ್ಕಾರದ ಎಲ್ಲಾ ಸೌಲಭ್ಯಗಳನ್ನು ಹಾಗೂ ತಾಂತ್ರಿಕ ನೆರವುಗಳನ್ನು ಸಕಾಲದಲ್ಲಿ ರೇಷ್ಮೆ ಬೆಳೆಗಾರರಿಗೆ ತಲುಪಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ. |
| ಆ) | ಬಂದಿದ್ದಲ್ಲಿ, ಇಲಾಖೆಗೆ ಮಂಜೂರಾಗಿರುವ, ಭರ್ತಿಯಾಗಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; | |
| ಇ) | ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ನೇಮಕಾತಿ ಮಾಡಲು ಸರ್ಕಾರ ಕ್ರಮವಹಿಸಿದೆಯೇ ಹಾಗೂ ಯಾವ ಕಾಲಮಿತಿಯೊಳಗೆ ಸದರಿ ಎಲ್ಲಾ ಖಾಲಿ ಇರುವ ಹುದ್ದೆಗಳಿಗೆ ಪೂರ್ಣ ಪ್ರಮಾಣದಲ್ಲಿ ಸಿಬ್ಬಂದಿಗಳನ್ನು ನೇಮಕ ಮಾಡಲಾಗುವುದು? | ಕಳೆದ ಸಾಲಿನಲ್ಲಿ ಒಟ್ಟು ಇಲಾಖೆಯ 69 ರೇಷ್ಮೆ ವಿಸ್ತರಣಾಧಿಕಾರಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲಾಗಿರುತ್ತದೆ.<br><br>ಇಲಾಖಾ ವೃಂದ ಮತ್ತು ನೇಮಕಾತಿ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಹಾಗೂ ಇಲಾಖಾ ಪುನರ್ ಸಂಘಟನೆ ಪ್ರಕ್ರಿಯೆಯು ಪ್ರಸ್ತುತ ಚಾಲನೆಯಲ್ಲಿರುವುದರಿಂದ ಪ್ರಕ್ರಿಯೆ ಅಂತಿಮಗೊಂಡ ನಂತರ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. |

ಕಡತ ಸಂಖ್ಯೆ: ರೇಷ್ಮೆ 74 ರೇಇವಿ 2026

(ಕೆ.ವೆಂಕಟೇಶ್)

ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು.